ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ಕೊಡಗು ಜಿಲ್ಲೆಯ ಮಡಿಕೇರಿ ನಗರ ಸಭೆ ವ್ಯಾಪ್ತಿಯಲ್ಲಿ ರಸ್ತೆ, ಚರಂಡಿ ತಡೆಗೋಡೆ ಹಾಗೂ ಸೇತುವೆ ದುರಸ್ತಿ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು):-

149 (141) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯ ಮಡಿಕೇರಿ ನಗರ ಸಭೆ ವ್ಯಾಪ್ತಿಯ ಹಲವಾರು ರಸ್ತೆ, ಚರಂಡಿ ತಡೆಗೋಡೆ ಹಾಗೂ ಸೇತುವೆಗಳು ಸಂಪೂರ್ಣ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸದರಿ ರಸ್ತೆ, ಚರಂಡಿ ತಡೆಗೋಡೆ ಹಾಗೂ ಸೇತುವೆಗಳು ಇದುವರೆವಿಗೂ ದುರಸ್ಥಿಯಾಗದಿರಲು ಕಾರಣವೇನು;

(ಇ) ಮಡಿಕೇರಿ ನಗರ ಸಭೆಗೆ ಕಳೆದ 3 ವರ್ಷಗಳಿಂದ ರಸ್ತೆ, ಚರಂಡಿ ತಡೆಗೋಡೆ ಹಾಗೂ ಸೇತುವೆಗಳ ನಿರ್ಮಾಣ ಹಾಗೂ ದುರಸ್ಥಿಗಾಗಿ ವಿವಿಧ ಲೆಕ್ಕಶೀರ್ಷಿಕೆಗಳಡಿ ಬಿಡುಗಡೆಯಾದ ಹಾಗೂ ಖರ್ಚಾದ ಅನುದಾನವೆಷ್ಟು ; (ವಿವರ ನೀಡುವುದು)

(ಈ) ಸದರಿ ಅನುದಾನದಲ್ಲಿ ಕಳೆದ 3 ವರ್ಷಗಳಿಂದ ಕೈಗೊಂಡಿರುವ ವಿವಿಧ ಕಾಮಗಾರಿಗಳಾವುವು? (ವಿವರ ಹಾಗೂ ಪ್ರತಿ ಕಾಮಗಾರಿಗೆ ಖರ್ಚಾಗಿರುವ ಅನುದಾನದ ಸಂಪೂರ್ಣ ಮಾಹಿತಿ ಒದಗಿಸುವುದು)